ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ 8/2023**

ಪಿರ್ಯಾದಿ ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

- ವಿರುದ್ಧ -

ಆರೋಪಿ/ತರುಃ

1) ಸುರೇಶ ಬಿನ್ ಸಣ್ಣಈರಪ್ಪ, 48 ವರ್ಷ,
2) ಸಂತೋಷ ಬಿನ್ ಜಯಪ್ಪ, 25 ವರ್ಷ,
3) ಆನಂದ ಬಿನ್ ಸಣ್ಣಈರಪ್ಪ, 32 ವರ್ಷ,
4) ಸೋಮ ಬಿನ್ ಸಣ್ಣಈರಪ್ಪ, 45 ವರ್ಷ,
5) ಸುನಿ ಬಿನ್ ರಂಗಪ್ಪ, 26 ವರ್ಷ,

ಎಲ್ಲರೂ ವಾಸಃ ಸಣ್ಣದಹಳ್ಳಿ ಗ್ರಾಮ, ಲಿಂಗದಹಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು

****

-ಃ ದೋಷಾರೋಪಣೆಃ-

ಶ್ರೀಮತಿ ಉರ್ಮಿಳ.ವಿ., ಬಿ.ಎ.ಎಲ್, ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿತರಾದ ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆಗಳೇನೆಂದರೆಃ-

ದಿನಾಂಕ 21.06.2022 ರಂದು ರಾತ್ರಿ 10.30 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನ, ಸುಣ್ಣದಹಳ್ಳಿ ಗ್ರಾಮದಲ್ಲಿ ಚಾಸಾ-1 ಮೂರ್ತಪ್ಪ ಹಾಗೂ ಚಾಸಾ-4 ಪಾರ್ವತಮ್ಮರವರು ತಮ್ಮ ಮನೆಯ ಮುಂದೆ ಇರುವ ಕುರಿದೊಡ್ಡಿಯಲ್ಲಿ ಕುಳಿತು ಊಟ ಮಾಡುತ್ತಿರುವಾಗ ಆರೋಪಿತರಾದ ನೀವು ಏಕೋದ್ದೇಶದಿಂದ ಅಲ್ಲಿಗೆ ಬಂದು, ಅಡಿಕೆ ಸಸಿಗಳನ್ನು ಕಿತ್ತಿರುವ ವಿಚಾರದಲ್ಲಿ ಗಲಾಟೆ ಮಾಡಿ 1 ನೇ ಆರೋಪಿಯಾದ ನೀವು ದೊಣ್ಣೆಯಿಂದ ಚಾಸಾ-1 ರವರ ಎಡಕೈಗೆ ಹಾಗೂ ಬಲಕೈಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಬಂದು, 2 ನೇ ಆರೋಪಿಯಾದ ನೀವು ಚಾಸಾ-1 ರವರ ಮುಖಕ್ಕೆ ಕೈಯಿಂದ ಗುದ್ದಿ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಜಗಳ ಬಿಡಿಸಲು ಬಂದ ಚಾಸಾ-4 ರವರಿಗೆ 3 ರಿಂದ 5 ನೇ ಆರೋಪಿತರಾದ ನೀವು ಕೈಯಿಂದ ಪರಚಿ ಸಾಮಾನ್ಯ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಏಕೋದ್ದೇಶದಿಂದ ಬಂದು, ಜಗಳ ಬಿಡಿಸಲು ಬಂದ ಚಾಸಾ-4 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಅವಮಾನವನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ 17.03.2024

ಸಹಿ

**(ಉರ್ಮಿಳ.ವಿ)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.